ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಶಿಕ್ಷಕರ ಬಡ್ತಿಯಲ್ಲಿ ಸರಿಯಾದ ಮಾಹಿತಿ ನೀಡದಿರುವುದು

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) –

136 (146) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾರವಾರ ಜಿಲ್ಲೆಯ ಪ್ರೌಢ ಶಾಲಾ ವಿಭಾಗದಲ್ಲಿ ಸಧ್ಯಕ್ಕೆ ಶಿಕ್ಷಕರಿಗೆ ಬಡ್ತಿ ನೀಡುತ್ತಿದ್ದು ಇದಕ್ಕೆ ಇರುವ ಮಾನದಂಡವೇನು; (ಸವಿಸ್ತಾರ ವರದಿ ನೀಡುವುದು)

(ಆ) ಜಿಲ್ಲೆಯ ಶಿರಸಿ ಶೈಕ್ಷಣಿಕ ವಿಭಾಗದಲ್ಲಿ ಬರುವ ತಾಲ್ಲೂಕಿನಲ್ಲಿ ಎಷ್ಟು ಶಿಕ್ಷಕರಿಗೆ ಬಡ್ತಿ ನೀಡಲಾಗಿದೆ; ಬಡ್ತಿ ನೀಡುವಾಗ ಸರ್ಕಾರದ ನಿಯಮ ಉಲ್ಲಂಘನೆ ಮಾಡಿರುವುದು ನಿಜವೇ; (ತಾಲ್ಲೂಕುವಾರು ಶಿಕ್ಷಕರ ಶಾಲಾವಾರು ಸರ್ಕಾರದ ನಿಯಮದಂತೆ ಸವಿಸ್ತಾರ ವರದಿ ನೀಡುವುದು)

(ಇ) ಸದರಿ ಶಿಕ್ಷಕರ ತಾಲ್ಲೂಕುವಾರು ಮಾಹಿತಿ ನೀಡುವಲ್ಲಿ ಶಿಕ್ಷಣ ಇಲಾಖೆ ಅವ್ಯವಹಾರಕ್ಕೆ ಆಸ್ಪದವಾಗುವಂತೆ ಕೆಲವೊಂದು ತಪ್ಪು ಮಾಹಿತಿ ನೀಡಿರುತ್ತಾರೆಂದು ತಿಳಿದು ಬಂದಿದ್ದು; ಈ ಕುರಿತು ಸರ್ಕಾರ ಸೂಕ್ತ ತನಿಖೆ ಮಾಡುವುದೇ? (ವಿವರ ನೀಡುವುದು)